

# ಮಕ್ಕಳ ಪರೀಕ್ಷೆ
# ಪಾಲಕರ ತಯಾರಿ ಹೇಗೆ?

ಪರೀಕ್ಷೆ ಕೇವಲ ಮಕ್ಕಳಿಗೆ ಮಾತ್ರವಲ್ಲ; ಹೆತ್ತವರಿಗೂ! ನಿಮ್ಮ ಚಟುವಟಿಕೆಗಳು ಮಕ್ಕಳ ಪರೀಕ್ಷೆ ತಯಾರಿಯ ಮೇಲೆ ಪರಿಣಾಮ ಬೀರುತ್ತದೆ ಎನ್ನುವುದು ನೆನಪಿರಲಿ.

■ ಸೌಮ್ಯ ಬೀನಾ

ಮಕ್ಕಳ ಶಿಕ್ಷಣದ ವಾರ್ಷಿಕ ಅವಧಿಯ ಕೊನೆಯ ಹಂತ, ಪರೀಕ್ಷಾ ಸಮಯ. ಅತ್ಯಂತ ಮುಖ್ಯವಾದ ಘಟ್ಟ. ಈಗಿನ ಶಿಕ್ಷಣ ವಿಧಾನದ ಪರಿಸ್ಥಿತಿ ನೋಡಿದರೆ, ಮಕ್ಕಳಿಗೆ ಎಷ್ಟರ ಮಟ್ಟಿಗೆ ಪರೀಕ್ಷಾ ಆತಂಕವಿರುತ್ತದೋ ಅದಕ್ಕಿಂತ ದುಪ್ಪಟ್ಟು ಆತಂಕ ಪೋಷಕರಲ್ಲಿ ಇರುತ್ತದೆ. ತಮ್ಮ ಮಗು ಓದಿನಲ್ಲಿ ಮುಂಚೂಣಿಯಲ್ಲಿರಬೇಕೆಂಬ ಅಭಿಲಾಷೆ ಪ್ರತಿಯೊಬ್ಬ ಪಾಲಕನ ಒತ್ತಾಸೆಯಾಗಿರುತ್ತದೆ.

ಎಲ್ಲಾ ಮಕ್ಕಳ ಬುದ್ಧಿ ಮಟ್ಟವು ಒಂದೇ ರೀತಿಯಲ್ಲಿ ಇರುವುದಿಲ್ಲ. ಆದ್ದರಿಂದ, ಹೆಚ್ಚಿನ ಸಿದ್ಧತೆ ಖಂಡಿತ ಅವಶ್ಯಕ. ಯುದ್ಧಕಾಲೇ ಶಸ್ತ್ರಾಭ್ಯಾಸ ಎಂಬಂತೆ ಪರೀಕ್ಷೆಯ ಕೊನೆಯ ವಾರದಲ್ಲಿ ಪುಸ್ತಕ ಹಿಡಿಯುವ ಮಕ್ಕಳಿಗೂ, ಗಾಬರಿಸಿ ಗದರಿಸಿ ಇನ್ನಷ್ಟು ಆತಂಕ ಪಟ್ಟು ಒತ್ತಡ ಹಾಕುವ ಪೋಷಕರಿಗೂ, ಇದೋ ಒಂದು ಚಿಕ್ಕ ಟಿಪ್ಪಣಿ ಇಲ್ಲಿದೆ.

**1. ಮಗುವಿನ ಶೈಕ್ಷಣಿಕ ಪ್ರಗತಿ ಬಗ್ಗೆ ಶಾಲೆಯಲ್ಲಿ ವಿಚಾರಣೆ.**

ನಮ್ಮ ಮಕ್ಕಳನ್ನು ಒಳ್ಳೆಯ ಶಿಕ್ಷಣ ಕೊಡುವ ಭರವಸೆಯನ್ನು ನೀಡುವ ಶಾಲೆಗೆ ಸೇರಿಸಿದರೆ ನಮ್ಮ ಜವಾಬ್ದಾರಿ ಮುಗಿದೀತೇ? ಖಂಡಿತವಾಗಿಯೂ ಅಷ್ಟೇ ಸಾಲದು. ಮಕ್ಕಳ ಕಲಿಕೆಯ ಹಂತದಲ್ಲಿ ಅವರಷ್ಟೇ ನಾವು ಕೂಡ ಭಾಗಿಯಾಗಬೇಕು. ಪರೀಕ್ಷೆಗೆ ಇನ್ನೂ ಎರಡು ತಿಂಗಳಿರುವಂತೆಯೇ ಒಮ್ಮೆ ಶಾಲೆಯಲ್ಲಿ ಮಗುವಿನ ಪ್ರಗತಿಯ ಬಗ್ಗೆ ವಿಚಾರಿಸಿ, ನಮ್ಮ ಮಗುವಿಗೆ ಯಾವ ವಿಷಯ ಕಷ್ಟವಾಗುತ್ತಿದೆ, ಶಾಲೆಯಲ್ಲಿ ಕಲಿಕಾ ಸಾಮರ್ಥ್ಯ, ಮಿತಿ, ಕೊರತೆಗಳ ಬಗ್ಗೆ ವಿಚಾರಿಸಿಕೊಳ್ಳುವುದು ಒಳಿತು.

ಇದರಿಂದ ನಮ್ಮ ಮಕ್ಕಳ ಪರೀಕ್ಷಾ ತಯಾರಿಗೆ ನಿಗದಿತ ಸಮಯ ಮತ್ತು ಯಾವ ವಿಷಯಗಳಿಗೆ ಹೆಚ್ಚಿನ ಗಮನ ಕೊಡುವ ಅವಶ್ಯಕತೆಯಿದೆ ಎಂಬುದರ ಪಾರದರ್ಶಕತೆ ನಮಗೆ ದೊರೆಯುತ್ತದೆ. ಆದರೆ ಈ ಪ್ರಗತಿ ಪರಿಶೀಲನೆ ನಮ್ಮ ಮಗುವಿನ ಜೊತೆ ಮುಂಚಿತವಾಗಿಯೇ ಶಿಕ್ಷಕರ ಸಮ್ಮತಿಯಿಂದ ಅವರ ಸಮ್ಮುಖದಲ್ಲಿಯೇ ಆದರೆ ಅನುಕೂಲ. ಇದರಿಂದ,  ನೀವು ಯಾವುದೇ ರೀತಿಯ ದೂರಿನ ಭಾವನೆಯಲ್ಲಿಲ್ಲ ಎಂಬುದು ನಿಮ್ಮ ಮಗುವಿಗೆ ಮನದಟ್ಟಾಗುತ್ತದೆ.